ಅಭಿಯಾಚನೆ ಕ್ರಮಾಂಕ–೪೦ ಸಚಿವಾಲಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಚಿವಾಲಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨,೮೦ ೯೪,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ–೪೧ ಜಿಲ್ಲಾಡಳಿತ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಿಲ್ಲಾಡಳಿತಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೯,೫೮,೮೭,೦೦೦ ರೂ ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೪೨–ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧,೨೭,೭೮,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

Supplementary Estimates for 1986-87

ಮಂಡನಾ ಪ್ರಸ್ತಾವ

ಅಧ್ಯಕ್ಷರು.—ಈಗ ಅನುಪೂರಕ ಅನುದಾನ ಬೇಡಿಕೆಗಳ (೨ನೇ ಕಂತು) ಮೇಲಿನ ಪ್ರಸ್ತಾವವನ್ನು ಮುಖ್ಯ ಮಂತ್ರಿಗಳು ಮಂಡಿಸುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಟೆಲಿಕ್ಸ್ ಮೆಸೇಜ್ ಕಳುಹಿಸಿ ಎಲೆಕ್ಷನ್ ಅನ್ನು ವಿತ್ ಪೋಡ್ಡ್ ಮಾಡಿಲ್ಲವೆ ? ಆ ರೀತಿ ಇದನ್ನು ವಿತಕ್ಕೆ ಮಾಡುವುದಕ್ಕಾಗುವುದಿಲ್ಲ ?

ಅಧ್ಯಕ್ಷರು.—ಆ ವಿಚಾರ ಆಗಲೇ ಮುಕ್ತಾಯವಾಯಿತು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಈ ರೀತಿ ಮಾಡಿದರೆ ನಾವು ಮಾತನಾಡುವುದು ಕಷ್ಟವಾಗುತ್ತದೆ.

ಅಧ್ಯಕ್ಷರು.—ಈಗ ನಾನು ಏನೂ ಮಾಡುವುದಕ್ಕಾಗುವುದಿಲ್ಲ, ಈಗ ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ನಾವು ಅದನ್ನು ಪ್ರೊಟೆಸ್ಟ್ ಮಾಡಿ ವಾಕ್‌ಔಟ್ ಮಾಡುತ್ತೇವೆ.

ಶ್ರೀಮತಿ ಕೆ. ಎಸ್. ನಾಗರತ್ನಮ್ಮ.—ಈ ತರಹ ಆದರೆ ಕಾರ್ಯಕಲಾಪ ಮಾಡುವುದು ಕಷ್ಟವಾಗುತ್ತದೆ

(ಈ ಹಂತದಲ್ಲಿ ಮಾನ್ಯ ಕಾಂಗ್ರೆಸ್ ಪಕ್ಷದ ಸದಸ್ಯರೆಲ್ಲ ಸಭಾತ್ಯಾಗ ಮಾಡಿದರು)

ಶ್ರೀ ಜೆ. ಹೆಚ್. ಪಟೇಲ್.—ವಾಕ್‌ಔಟ್ ಮಾಡಿದವರಿಗೆ ಹಾಗೆಯೇ ಕೇರಳ ತನಕ ಹೋಗಿ ಬರಲಿ.

ಶ್ರೀ ಎ. ಲಕ್ಷ್ಮೀಸಾಗರ್.—ಎರಡನೇ ಕಂತಿನ ಅನುಪೂರಕ ಬೇಡಿಕೆಗಳು ಏನಿವೆ ಇದರಲ್ಲಿ ಸರ್ಕಾರದಿಂದ ಖರ್ಚಾಗತಕ್ಕದ್ದು ೯೭.೨೭ ಕೋಟಿ ರೂಪಾಯಿಗಳು. ಇದು ಅವಶ್ಯಕವಾಗಿ ವರ್ಷದ ವಂಧ್ಯದಲ್ಲಿ ಖರ್ಚು ಮಾಡಬೇಕಾದ ಹಣಕ್ಕೆ ಸಂಬಂಧಪಟ್ಟದ್ದಾಗಿದೆ. ಮಾನ್ಯ ಸಭೆ ಈ ಬೇಡಿಕೆಗಳಿಗೆ ಅನುಮತಿ ಕೊಡಬೇಕೆಂದು ಪ್ರಾರ್ಥಿಸುತ್ತೇನೆ.

ಅಧ್ಯಕ್ಷರು.—ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕಂತ್ತೇನೆ. ಪ್ರಸ್ತಾವ ಹೀಗಿದೆ.

''೧೯೮೭ನೇ ಮಾರ್ಚ್ ೩೧ರ ಅಂತ್ಯದೊಳಗೆ ೨ನೇ ಕಂತಿನ ಪೂರಕ ಬೇಡಿಕೆಗಳ ಸಂಖ್ಯೆ ೧ ರಿಂದ ೫ ೭ ರಿಂದ ೧೦, ೧೨ ರಿಂದ ೧೪, ೧೮ ರಿಂದ ೨೪, ೨೭ ರಿಂದ ೪೩, ೪೫ ಮತ್ತು ೪೬, ೪೯ ರಿಂದ ೫೨ ೫೫ ಹಾಗೂ ೫೭ ರಿಂದ ೬೫, ಈ ಬೇಡಿಕೆಗಳ ಸಂಖ್ಯೆಗಳಿಗೆ ಸಂಬಂಧಿಸಿದಂತೆ ಸಂದಾಯ ಮಾಡಂ ವಲ್ಲಿ ಬರತಕ್ಕ ಹೆಚ್ಚಿನ ವೆಚ್ಚವನ್ನು ಭರಿಸಲಂ ಸರ್ಕಾರಕ್ಕೆ ಬೇಡಿಕೆಗಳ ಪಟ್ಟಿಯಲ್ಲಿರುವ ಮೊತ್ತಕ್ಕೆ ಮೀರದ ಮೊಬಲಗನ್ನು ಮಂಜೂರ್ಮಾಡಬೇಕಂ.''

ಪ್ರಸ್ತಾವ ಅಂಗೀಕೃತವಾಗಿದೆ

ಅಧ್ಯಕ್ಷರು.—ಈಗ ಸಭೆಯನ್ನು ಮುಂದೂಡಲಾಗಿದೆ. ಪುನಃ ಮಧ್ಯಾಹ್ನ ೩ ಗಂಟೆಗೆ ಸೇರುವುದು.

(ಸಭೆ ೧೨-೨೫ಕ್ಕೆ ಮುಕ್ತಾಯವಾಗಿ ೩ ಗಂಟೆಗೆ ಸೇರುವುದಾಗಿ ನಿಶ್ಚಯವಾಯಿತು)

(ಸಭೆಯು ಸಂಜೆ ೫ ಗಂಟೆ ೪೬ ನಿಮಿಷಕ್ಕೆ ಪುನಃ ಸಮಾವೇಶಗೊಂಡಿತು)

ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್‌ರವರು) ಪೀಠವನ್ನಲಂಕರಿಸಿದರು.

ಶಾಸನ ರಚನಾ ಕಾರ್ಯಕಲಾಪಗಳು

ವಿಧೇಯಕಗಳನ್ನು ಮಂಡಿಸುವುದು

೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).—

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿ ಅವರ ಪರವಾಗಿ).—ಮಾನ್ಯ ಅಧ್ಯಕ್ಷರೆ, ೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).—

ಶ್ರೀ ರಾಮಕೃಷ್ಣ ಹೆಗಡೆ ಮುಖ್ಯಮಂತ್ರಿ)ಅವರ ಪರವಾಗಿ).— ಮಾನ್ಯ ಅಧ್ಯಕ್ಷರೆ, ''೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ ೨) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.''

ಅಧ್ಯಕ್ಷರು.—''ಪ್ರಸ್ತಾವ ಏನೆಂದರೆ, ೧೯೮೭ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ ೨) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು